ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 24
2. ಸದಸ್ಯರ ಹೆಸರು : ಶ್ರೀ ಯು.ಬಿ.ವೆಂಕಟೇಶ್
3. ಉತ್ತರಿಸಬೇಕಾದ ದಿನಾಂಕ : 23-09-2021

ಕ್ರ ಸಂ	ಪ್ರಶ್ನೆಗಳು	ಉತ್ತರಗಳು
ಅ	ರಾಜ್ಯದಲ್ಲಿ ಕಾವೇರಿ ನದಿಗೆ ಅಡ್ಡಲಾಗಿ ಮೇಕೆದಾಟು ಅಣೆಕಟ್ಟು ನಿರ್ಮಿಸುವ ಯೋಜನೆಗೆ ಇರುವ ತೊಂದರೆಗಳೇನು;	ಮೇಕೆದಾಟು ಸಮತೋಲನ ಜಲಾಶಯ ಹಾಗೂ ಕುಡಿಯುವ ನೀರಿನ ಯೋಜನೆಯನ್ನು ಕಾವೇರಿ ನದಿಗೆ ಅಡ್ಡಲಾಗಿ ಅರ್ಕಾವತಿ ಹಾಗೂ ಕಾವೇರಿ ನದಿಯ ಸಂಗಮದ ಸಮೀಪದಲ್ಲಿ ನಿರ್ಮಿಸಿ, 67.16 ಟಿ.ಎಂ.ಸಿ ನೀರನ್ನು ಶೇಖರಿಸಲು ರೂ.9000.00 ಕೋಟಿ ಮೊತ್ತದ ಡಿ.ಪಿ.ಆರ್. ತಯಾರಿಸಿ ದಿನಾಂಕ:18-01-2019 ರಂದು ಕೇಂದ್ರ ಜಲ ಆಯೋಗಕ್ಕೆ ಸಲ್ಲಿಸಲಾಗಿದೆ. **ಸದರಿ ಯೋಜನೆಗೆ ಬೇಕಾದ ತೀರುವಳಿಗಳು :-**
ಆ	ತೊಂದರೆಗಳನ್ನು ನಿವಾರಿಸಿ, ಯೋಜನೆಯನ್ನು ಕಾಲಮಿತಿಯೊಳಗೆ ಅನುಷ್ಠಾನಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?	i. ಸದರಿ ವಿವರವಾದ ಯೋಜನಾ ವರದಿಯು ಕೇಂದ್ರ ಜಲ ಆಯೋಗದ ವಿವಿಧ ನಿರ್ದೇಶನಾಲಯಗಳ ತೀರುವಳಿ ಅಗತ್ಯವಿರುತ್ತದೆ. ii. ಕೇಂದ್ರ ಜಲ ಆಯೋಗ, ನವದೆಹಲಿ ರವರು ಸದರಿ ಯೋಜನೆಯ ಕುರಿತು Cauvery Water Management Authority ರವರ ಅಭಿಪ್ರಾಯ ಕೋರಿದೆ; iii. ಯೋಜನೆಗೆ ಅವಶ್ಯವಿರುವ Environmental Impact Assessment (EIA) & Environmental Management Plan (EMP) ವರದಿಗಳನ್ನು ತಯಾರಿಸಲು Terms of Reference (ToR) ಅರ್ಜಿಗೆ ಪರಿಸರ ಅರಣ್ಯ ಮತ್ತು ಹವಾಮಾನ ಬದಲಾವಣೆಯ ಸಚಿವಾಲಯದ (MoEF & CC) ಅನುಮೋದನೆ ನಿರೀಕ್ಷಿಸಲಾಗಿದೆ. iv. ಪ್ರಸ್ತಾಪಿತ ಯೋಜನೆಗೆ ವನ್ಯಜೀವಿ, ಅರಣ್ಯ ಹಾಗೂ ಪರಿಸರದ ಶಾಸನಬದ್ಧ ತೀರುವಳಿಗಳ ಅವಶ್ಯವಿರುತ್ತದೆ. v. ತಮಿಳುನಾಡು ಸರ್ಕಾರವು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ದಿನಾಂಕ:30-11-2018 ರಂದು M.A. No.3127 of 2018 ಅನ್ನು ದಾಖಲಿಸಿದ್ದು, ನ್ಯಾಯಾಲಯದಲ್ಲಿ ಬಾಕಿ ಇರುತ್ತದೆ. vi. ಮಾನ್ಯ ರಾಷ್ಟ್ರೀಯ ಹಸಿರು ನ್ಯಾಯಮಂಡಳಿ, ಪ್ರಧಾನ ಪೀಠ, ನವದೆಹಲಿ, ರವರ ದಿನಾಂಕ:17-06-2021 ರ ಆದೇಶವನ್ನು ಪ್ರಶ್ನಿಸಿ ತಮಿಳುನಾಡು ರಾಜ್ಯವು ದಿನಾಂಕ:11-08-2021 ರಂದು ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಮೇಲ್ಮನವಿ ಸಲ್ಲಿಸಿರುತ್ತದೆ. **ಸರ್ಕಾರದಿಂದ ಈ ಕೆಳಕಂಡ ಕ್ರಮ ಕೈಗೊಳ್ಳಲಾಗಿದೆ :** • ಮಾನ್ಯ ಮುಖ್ಯಮಂತ್ರಿಗಳು, ಮಾನ್ಯ ಜಲಸಂಪನ್ಮೂಲ ಸಚಿವರು ಹಾಗೂ ಸರ್ಕಾರದ ಮುಖ್ಯ ಕಾರ್ಯದರ್ಶಿಯವರುಗಳಿಂದ ಮಾನ್ಯ ಕೇಂದ್ರ ಜಲ ಶಕ್ತಿ ಸಚಿವರು, ಮಾನ್ಯ ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವರು ಹಾಗೂ ಕಾರ್ಯದರ್ಶಿಗಳು, ಕೇಂದ್ರ ಜಲ ಶಕ್ತಿ ಮಂತ್ರಾಲಯ, ಭಾರತ ಸರ್ಕಾರ ರವರಿಗೆ ಹಲವಾರು ಪತ್ರಗಳನ್ನು ಬರೆದು ಸದರಿ ಯೋಜನೆಗೆ ಅವಶ್ಯವಿರುವ ಕೇಂದ್ರದ ವಿವಿಧ ಇಲಾಖೆಗಳ ಅವಶ್ಯಕ ತೀರುವಳಿಗಳನ್ನು ತುರ್ತಾಗಿ ಒದಗಿಸಿಕೊಡುವಂತೆ ಕೋರಲಾಗಿದೆ. • ಸಕ್ಷಮ ಪ್ರಾಧಿಕಾರಗಳ ಅನುಮೋದನೆಯನ್ನು ಪಡೆಯಲು ಅಗತ್ಯ ಕ್ರಮವಹಿಸಲಾಗುತ್ತಿದೆ.

ಸಂಖ್ಯೆ:ಜಸಂಇ 159 ಎನ್‌ಎಲ್‌ಎ 2021

(ಗೋವಿಂದ ಎಂ. ಕಾರಜೋಳ)
ಜಲಸಂಪನ್ಮೂಲ ಸಚಿವರು